ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೦೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಸೋಮವಾರ, ದಿನಾಂಕ: ೦೯ನೇ ಫೆಬ್ರವರಿ, ೨೦೧೫**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ರಾಜ್ಯ ಸಚಿವರು

---

## ಪೆಟ್ರೋಲ್ ದರ ಇಳಿಕೆಯಿಂದ ಬಸ್ ದರ ಇಳಿಕೆ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೧ (೫೬೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಪೆಟ್ರೋಲ್ ಮತ್ತು ಡೀಸೆಲ್ ದರದಲ್ಲಿ ಎಷ್ಟು ಬಾರಿ ಇಳಿಕೆಯಾಗಿದೆ ; ವಿವರ ನೀಡುವುದು ;

(ಆ) ಗಮನಾರ್ಹ ರೀತಿಯಲ್ಲಿ ಈ ದರಗಳು ಇಳಿಕೆಯಾಗಿದ್ದರೂ, ಬಸ್ ದರ ಇಳಿಕೆಗೆ ಸರ್ಕಾರ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಬೆಂಗಳೂರಿನ ಜನ ನಿತ್ಯ ಓಡಾಡುವ ಆಟೋಗಳ ದರ ಪರಿಷ್ಕರಣೆಗೆ ಸರ್ಕಾರ ಮುಂದಾಗುವುದೇ ;

(ಈ) ಬಿ.ಎಂ.ಟಿ.ಸಿ. ಮತ್ತು ಕೆ.ಎಸ್.ಆರ್.ಟಿ.ಸಿ. ನಷ್ಟದಲ್ಲಿರುವುದರಿಂದ, ದರ ಇಳಿಸಲು ಸಾಧ್ಯವಿಲ್ಲವೆಂಬುದರ ಬಗ್ಗೆ ಸರ್ಕಾರದ ನಿಲುವೇನು ; ಹಾಗಿದ್ದಲ್ಲಿ, ನಷ್ಟಕ್ಕೆ ಸೂಕ್ತ ಕಾರಣಗಳೇನು ; ಈ ಬಗ್ಗೆ ಸರ್ಕಾರದ ಚಿಂತನೆ ಏನು ;

(ಉ) ಭ್ರಷ್ಟಾಚಾರದಿಂದ ಸಾರಿಗೆ ಮತ್ತು ಬಿ.ಎಂ.ಟಿ.ಸಿ.ಯಲ್ಲಿ ನಷ್ಟ ಉಂಟಾಗಿರುವುದಕ್ಕೆ ಸಾರ್ವಜನಿಕರು ಹೊಣೆಗಾರರೆ ; ಹಾಗಿದ್ದಲ್ಲಿ ಡೀಸೆಲ್, ಪೆಟ್ರೋಲ್ ದರ ಇಳಿಕೆಯಾದರೂ ಬಸ್ ದರ ಇಳಿಕೆ ಮಾಡದೆ ಸಾರ್ವಜನಿಕರಿಗೆ ನಷ್ಟ ಉಂಟು ಮಾಡುತ್ತಿರುವುದು ಸಮಂಜಸವೇ ? (ವಿವರ ನೀಡುವುದು)

## ರಾಜ್ಯದ ನೇಕಾರರಿಗೆ ಹೊಸ ತಂತ್ರಜ್ಞಾನ ಅಳವಡಿಸುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೬೨ (೭೪೫) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಡ ನೇಕಾರರು, ಕೂಲಿ ಕಾರ್ಮಿಕ ನೇಕಾರರು, ಇನ್ನೂ ಹಳೇ ಪದ್ಧತಿಯಲ್ಲೇ ನೇಕಾರಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಅನೇಕ ನಗರಗಳಲ್ಲಿ ಹಳೇ ಪದ್ಧತಿಯ ನೇಕಾರಿಕೆ ಮಗ್ಗಗಳಿಗೆ ಅನುಮತಿ ನಿರಾಕರಿಸಿರುವ ಹಿನ್ನೆಲೆಯಲ್ಲಿ ಹೊಸ ಯೋಜನೆ ಮುಖಾಂತರ ನೇಕಾರಿಕೆ ಉದ್ಯಮ ಅಳವಡಿಸಲು ಯೋಜನೆ ಮಾಡಲಾಗಿದೆಯೇ ;

(ಇ) ರಾಜ್ಯದಲ್ಲಿರುವ ಬಡ ನೇಕಾರರಿಗೆ ಹೊಸ ತಂತ್ರಜ್ಞಾನ, ವಿಜ್ಞಾನ ಮೂಲಕ ಇವತ್ತಿನ ದುಡಿಮೆಗೆ ತಕ್ಕಂತೆ ನೂತನ ಯೋಜನೆ ತಯಾರು ಮಾಡಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಮುಂದೆ ಯೋಜನೆ ತಯಾರು ಮಾಡುವಾಗ ರಾಜ್ಯದ ನೇಕಾರರ ಸ್ಥಿತಿಗತಿ ಕುರಿತು ಯೋಜನೆ ಮಾಡಲಾಗುವುದೇ ;

## ಹೊಸ ವೈದ್ಯಕೀಯ ಕಾಲೇಜುಗಳ ಸ್ಥಾಪನೆ

**ಡಾ॥ ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩ (೬೧೦) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೦೪–೦೫ರಿಂದ ಪ್ರಾರಂಭವಾದ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಎಷ್ಟು ;

(ಆ) ಒಂದು ವೈದ್ಯಕೀಯ ಕಾಲೇಜು (ಆಸ್ಪತ್ರೆ ಸೇರಿ) ಸ್ಥಾಪಿಸಲು ಪ್ರಾರಂಭಿಕ ಮತ್ತು ವಾರ್ಷಿಕ ಖರ್ಚು/ವೆಚ್ಚವೆಷ್ಟು ;

(ಇ) ಹೊಸದಾಗಿ ಪ್ರಾರಂಭಿಸಲಾಗಿರುವ ವೈದ್ಯಕೀಯ ಕಾಲೇಜುಗಳ ಗುಣಮಟ್ಟ, ವಿದ್ಯಾರ್ಥಿಗಳ ಬೇಡಿಕೆಗೆ ಪೂರಕವಾದ ಶಿಕ್ಷಕರು ಮತ್ತು ಕ್ಲಿನಿಕಲ್ ಸೌಲಭ್ಯಗಳನ್ನು ಹೊಂದಿವೆಯೇ ;

(ಈ) ಸರ್ಕಾರಿ ಕಾಲೇಜುಗಳಲ್ಲಿ ವಸೂಲು ಮಾಡುತ್ತಿರುವ ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಎಷ್ಟು ;

(ಉ) ಖಾಸಗಿ ಕಾಲೇಜುಗಳಲ್ಲಿ ಸಿಇಟಿ ಮೂಲಕ ಪ್ರವೇಶ ಆಗುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪ (೭೩೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆಯು ಯಾವ ಮಟ್ಟದಲ್ಲಿದೆ ;

(ಆ) ಈ ಗಂಭೀರ ಸಮಸ್ಯೆಯ ಬಗ್ಗೆ ಸರ್ವೆ ಮಾಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಈ ಸಮಸ್ಯೆಯನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ಬೆಳಗಾವಿ ಜಿಲ್ಲೆಯ ಪರಿಸ್ಥಿತಿ ಏನು ; ಅಂಕಿ–ಅಂಶ ಒದಗಿಸುವುದು ; ವಾಸ್ತವಾಂಶ ಒಳಗೊಂಡ ಸಮೀಕ್ಷಾ ವರದಿ ನೀಡುವುದು ?

## ಕುರುಬ ಸಮಾಜ ಬಾಂಧವರ ಸರ್ವಾಂಗೀಣ ಅಭಿವೃದ್ಧಿ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೬೫ (೬೧೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಹಿಂದುಳಿದ ಸಮುದಾಯಗಳ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಆ) ಹಿಂದುಳಿದ ವರ್ಗಗಳ ಯುವಕರು ಸ್ವಯಂ ಉದ್ಯೋಗ ಹೊಂದಲು ಸರ್ಕಾರವು ನೀಡುತ್ತಿರುವ ಪ್ರೋತ್ಸಾಹಗಳೇನು ;

(ಇ) ಕುರುಬ ಸಮಾಜ ಬಾಂಧವರ ಸರ್ವಾಂಗೀಣ ಅಭಿವೃದ್ಧಿಗಾಗಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು ; ಸದರಿ ಯೋಜನೆಗಳಿಗೆ ಒದಗಿಸಲಾಗಿರುವ ಹಣವೆಷ್ಟು ? (ವಿವರಗಳನ್ನು ನೀಡುವುದು)

## ಕಿದ್ವಾಯಿ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೬೬ (೭೧೭) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಬರುವ ಒಳ/ಹೊರ ರೋಗಿಗಳಿಗೆ ಮೂಲಭೂತ ಸೌಕರ್ಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆಸ್ಪತ್ರೆಯಲ್ಲಿ ಸರಿಯಾದ ಶೌಚಾಲಯ ವ್ಯವಸ್ಥೆ, ರೋಗಿಗಳಿಗೆ ಅಗತ್ಯ ಬಿಸಿ ನೀರು ಕಾಯಿಸಿಕೊಳ್ಳಲು ಯೋಗ್ಯವಾದ ವ್ಯವಸ್ಥೆ ಇಲ್ಲದೇ ಶೌಚಾಲಯದಲ್ಲಿ ಸ್ಟವ್ ಇಟ್ಟುಕೊಂಡು, ನೀರು ಮತ್ತು ಹಾಲನ್ನು ಬಿಸಿ ಮಾಡಿಕೊಳ್ಳುತ್ತಿರುವುದು ನಿಜವೇ ; ಹಾಗೂ ರೋಗಿಗಳ ಜೊತೆಯಲ್ಲಿ ಬರುವವರು ಉಳಿದುಕೊಳ್ಳುವ ಧರ್ಮಶಾಲೆಗಳಲ್ಲಿ ಸ್ವಚ್ಛತೆ ಇಲ್ಲದಿರುವುದು ಹಾಗೂ ವಾರ್ಡ್ ಟೆರೇಸ್ ಮೇಲೆ ಕಸ–ಕುಡಿತದ ಬಾಟಲಿಗಳು ಬಿದ್ದಿರುವುದು ಸಾಮಾನ್ಯವಾಗಿಬಿಟ್ಟಿದೆ. ಈ ಬಗ್ಗೆ ಸ್ವಚ್ಛತೆ ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ವಿದ್ಯಾರ್ಥಿ ವೇತನ ನೀಡಿಕೆಯಲ್ಲಿ ತಾರತಮ್ಯ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೬೭ (೭೧೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದನೇ ತರಗತಿಯಿಂದ ಹತ್ತನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೀಡುತ್ತಿರುವ ವಿದ್ಯಾರ್ಥಿ ವೇತನದ ಪ್ರಮಾಣ ಎಷ್ಟು ; (ತರಗತಿವಾರು, ಜಾತಿವಾರು ವಿವರ ನೀಡುವುದು)

(ಆ) ಈ ವಿದ್ಯಾರ್ಥಿ ವೇತನ ನೀಡಿಕೆಯಲ್ಲಿ ತಾರತಮ್ಯ ಅನುಸರಿಸುತ್ತಿರುವುದಕ್ಕೆ ಕಾರಣಗಳೇನು ;

(ಇ) ಇದು ಮಕ್ಕಳ ಮನಸ್ಸಿನಲ್ಲಿ ಬೇಧಭಾವ ಉಂಟು ಮಾಡುವುದಿಲ್ಲವೇ ;

(ಈ) ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಪಡಿತರ ಚೀಟಿಯ ಅರ್ಜಿಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೮ (೫೪೧) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು–ತಾಲ್ಲೂಕುವಾರು, APL-BPL–ಅಂತ್ಯೋದಯ ಪಡಿತರ ಚೀಟಿ ಸಂಖ್ಯೆಯ ವಿವರ ನೀಡುವುದು)

(ಆ) ಸಾಕಷ್ಟು ಅರ್ಹ ಕುಟುಂಬಗಳು ಪಡಿತರ ಚೀಟಿಯಿಂದ ವಂಚಿತರಾಗಿ, ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) BPL-APL–ಹೊಸ ಪಡಿತರ ಚೀಟಿ ಕೋರಿ ಅರ್ಜಿಗಳನ್ನು ಯಾವ ದಿನಾಂಕದಿಂದ ಸ್ವೀಕರಿಸಲಾಗುವುದು ;

ಈ) APL-ನಿಂದ BPL–ಗೆ ಬದಲಾವಣೆಗಾಗಿ ಅರ್ಜಿಯನ್ನು ಯಾವಾಗ ಪ್ರಾರಂಭಿಸಲಾಗುವುದು ? (ಪೂರ್ಣ ವಿವರ ನೀಡುವುದು)

## ಮಾಹಿತಿ ತಂತ್ರಜ್ಞಾನ ಉದ್ದಿಮೆ ಸ್ಥಾಪನೆ, ಬೆಳವಣಿಗೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು)** –

೬೯ (೫೫೯) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಮಾಹಿತಿ ತಂತ್ರಜ್ಞಾನ (ಐ.ಟಿ.) ಉದ್ದಿಮೆಗಳ ಸಂಖ್ಯೆ ಎಷ್ಟು ; ಯಾವ ಭಾಗಗಳಲ್ಲಿ ಸ್ಥಾಪಿತವಾಗಿವೆ ; ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು, ತಂತ್ರಜ್ಞರ ಅಂದಾಜು ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಉದ್ದಿಮೆವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಕಳೆದ ೫ ವರ್ಷಗಳ ಅವಧಿಯಲ್ಲಿ ಈ ಸಾಫ್ಟ್‌ವೇರ್ ಉದ್ದಿಮೆಗಳಿಂದ ಸಂಗ್ರಹವಾದ ತೆರಿಗೆ ಎಷ್ಟು ; (ವರ್ಷವಾರು, ಉದ್ದಿಮೆವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಬೆಂಗಳೂರು ಸೇರಿದಂತೆ ರಾಜ್ಯದ ಇತರ ಭಾಗಗಳಲ್ಲಿಯೂ ಐ.ಟಿ. ಉದ್ದಿಮೆಗಳನ್ನು ಸ್ಥಾಪಿಸಲು ಅನುವಾಗುವಂತೆ ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ನೀತಿ ಏನು ; (ಮಾಹಿತಿ ಒದಗಿಸುವುದು)

ಈ) ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ವೈ–ಫೈ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಆಲೋಚಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಇದುವರೆಗಿನ ಪ್ರಗತಿಯ ಕುರಿತಾಗಿ ಸಂಪೂರ್ಣ ಮಾಹಿತಿ ಒದಗಿಸುವುದು ?

## ಮಾಹಿತಿ ತಂತ್ರಜ್ಞಾನ ಕಂಪನಿಯಲ್ಲಿ ಕೆಲಸ ಕಳೆದುಕೊಂಡಿರುವ ಉದ್ಯೋಗಿಗಳಿಗೆ ರಕ್ಷಣೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೭೦ (೫೯೭) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಖಾಸಗಿ ಮಾಹಿತಿ ತಂತ್ರಜ್ಞಾನ ವಹಿವಾಟಿನ ಕೆಲ ಕಂಪನಿಗಳು ದಿಢೀರ್ ಆಗಿ ತನ್ನ ಉದ್ಯೋಗಿಗಳನ್ನು ತೆಗೆದುಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉದ್ಯೋಗ ಕಳೆದುಕೊಂಡ ಬಹುತೇಕ ಟೆಕ್ಕಿಗಳು, ಬದಲಿ ಉದ್ಯೋಗ ದೊರೆಯದೆ, ತೀವ್ರ ತೊಂದರೆಗಳಿಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಂತಹ ಕಂಪನಿಗಳು ಮತ್ತು ಕೆಲಸ ಕಳೆದುಕೊಂಡಿರುವ ಉದ್ಯೋಗಿಗಳ ರಕ್ಷಣೆಗೆ ಸರ್ಕಾರ ಕ್ರಮಗಳನ್ನೇನಾದರೂ ತೆಗೆದುಕೊಂಡಿದೆಯೇ ;

ಈ) ಇಲ್ಲದಿದ್ದಲ್ಲಿ, ಮಾಹಿತಿ ತಂತ್ರಜ್ಞಾನ ವಹಿವಾಟಿನ ಖಾಸಗಿ ಕಂಪನಿಗಳ ಮತ್ತು ಉದ್ಯೋಗಿಗಳ ಉಳಿವಿಗೆ ಸರ್ಕಾರ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದೇ ?

## ಗಂಗಾಕಲ್ಯಾಣ ಯೋಜನೆಯಲ್ಲಿ ಫಲಾನುಭವಿಗಳ ಆಯ್ಕೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೧ (೫೮೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಯಲ್ಲಿ ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಮತ್ತು ಡಾ. ಬಿ.ಆರ್. ಅಂಬೇಡ್ಕರ್ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಗಂಗಾಕಲ್ಯಾಣ ಯೋಜನೆಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಅವುಗಳಲ್ಲಿ ಇಲ್ಲಿಯವರೆಗೆ ಕಾಮಗಾರಿ ಅನುಷ್ಠಾನಗೊಳಿಸದೇ ಬಾಕಿ ಉಳಿಸಿಕೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಮತ್ತು ವರ್ಷವಾರು ೨೦೧೩ ರಿಂದ ವಿವರ ನೀಡುವುದು)

(ಆ) ಇಷ್ಟು ದಿನ ಬಾಕಿ ಉಳಿಯಲು ಕಾರಣವೇನು ;

(ಇ) ಬಾಕಿ ಇರುವ ಫಲಾನುಭವಿಗಳ ಜಮೀನುಗಳಿಗೆ ಕೊಳವೆ ಬಾವಿಗಳನ್ನು ಕೊರೆಯಿಸಿ, ನೀರಾವರಿ ಸೌಲಭ್ಯವನ್ನು ಯಾವಾಗ ಒದಗಿಸಲಾಗುವುದು ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೬೨ (೬೦೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯಾದ್ಯಂತ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲೂಕಿನಲ್ಲಿ ಇರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಇ) ಈ ಆರೋಗ್ಯ ಕೇಂದ್ರಗಳಲ್ಲಿ ಸಮರ್ಪಕವಾಗಿ ಔಷಧಗಳನ್ನು ನೀಡಲಾಗುತ್ತಿದೆಯೇ ;

ಈ) ಚಳ್ಳಕೆರೆ ತಾಲ್ಲೂಕಿನ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬೆಳಗಾವಿ ಜಿಲ್ಲೆಯ ವಸತಿ ಶಾಲೆಗಳ ವಿವರ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೩ (೫೫೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಕಿತ್ತೂರು ರಾಣಿ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಮತ್ತು ಸದರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಶಾಲಾವಾರು ಮಕ್ಕಳ ಸಂಖ್ಯೆ ಎಷ್ಟು ;

(ಆ) ಈ ಶಾಲೆಗಳಲ್ಲಿರುವ ಅನುಮೋದಿತ ಹುದ್ದೆಗಳ ಸಂಖ್ಯೆ ಎಷ್ಟು ; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕ ಹಾಗೂ ಲಿಪಿಕ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಶಾಲೆಗಳಿಗೆ ಪೂರೈಸುತ್ತಿರುವ ಹಾಸಿಗೆ ಮತ್ತು ಹೊದಿಕೆಯ ಪ್ರತ್ಯೇಕ ಬೆಲೆಯನ್ನು ಒದಗಿಸುವುದು ;

ಈ) ಈ ಶಾಲೆಗಳು ಪ್ರಾರಂಭವಾದಾಗಿನಿಂದ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಮೊತ್ತ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಜಾತಿವಾರು ಜನಗಣತಿ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೭೪ (೫೭೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಹಿಂದುಳಿದ ಆಯೋಗದ ವತಿಯಿಂದ ಜಾತಿವಾರು ಜನಗಣತಿ ಮಾಡಲಾಗುತ್ತಿದೆಯೇ ; ಮಾಡುತ್ತಿದ್ದರೆ, ಜನಗಣತಿಯಲ್ಲಿ ಜನತೆಯಿಂದ ಪಡೆಯುತ್ತಿರುವ ಮಾಹಿತಿಗಳು ಯಾವುವು ; ಹಾಗೂ ಜನಗಣತಿಯ ಉದ್ದೇಶವೇನು ;

(ಆ) ಜನಗಣತಿಗೆ ವೆಚ್ಚವಾಗುವ ಹಣವೆಷ್ಟು ; ಜನಗಣತಿಗೆ ಬಳಕೆ ಮಾಡುವ ಸಿಬ್ಬಂದಿ ಯಾರ್‍ಯಾರು ; ಯಾವ ಅವಧಿಯಲ್ಲಿ ಜನಗಣತಿಯನ್ನು ಮಾಡಲಾಗುವುದು ; ಹಾಗೂ ಮುಕ್ತಾಯ ಮಾಡಲಾಗುವುದು ? (ಪೂರ್ಣ ವಿವರ ನೀಡುವುದು)

## ಬಿ.ಎಂ.ಟಿ.ಸಿ.ಯಲ್ಲಿನ ಬಸ್ಸುಗಳ ಸಂಖ್ಯೆ ಮತ್ತು ಮಾರ್ಗವಾರು ವಿವರಗಳು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೭೫ (೫೮೧) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಎಷ್ಟು ಬಸ್ಸುಗಳು ನಗರ, ಗ್ರಾಮಾಂತರ ಪ್ರದೇಶ ವ್ಯಾಪ್ತಿಯೂ ಸೇರಿದಂತೆ ವಿವಿಧ ಮಾರ್ಗಗಳಲ್ಲಿ ಸಂಚರಿಸುತ್ತಿವೆ ; (ಮಾರ್ಗವಾರು ಬಸ್ಸುಗಳ ಸಂಖ್ಯೆಯ ಕುರಿತಾದ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಯಾವ ಮಾರ್ಗ ವ್ಯಾಪ್ತಿಯಲ್ಲಿ ಪ್ರಯಾಣಿಕರ ಹೆಚ್ಚು ದಟ್ಟಣೆಯನ್ನು ಗುರುತಿಸಲಾಗಿದೆ ; ಪ್ರಯಾಣಿಕರ ಹಿತದೃಷ್ಟಿಯಿಂದ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ; (ವಿವರ ಒದಗಿಸುವುದು)

(ಇ) ಬಿ.ಎಂ.ಟಿ.ಸಿ. ಸಂಚಾರ ಮಾರ್ಗದಲ್ಲಿಯೇ (ಬಸ್ ಸ್ಟಾಪ್‌ನಿಂದಲೇ) ಖಾಸಗೀ ಮಿನಿ ಬಸ್, ವ್ಯಾನ್, ಕ್ಯಾಬ್‌ಗಳು ಸೇರಿದಂತೆ ಇತರೆ ವಾಹನಗಳು ಪ್ರಯಾಣಿಕರನ್ನು ಕರೆದೊಯ್ಯುತ್ತಿರುವ ವಿಷಯವನ್ನು ಸರ್ಕಾರವು ಗಂಭೀರವಾಗಿ

ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸಂಸ್ಥೆಗೆ ಆಗಿರಬಹುದಾದ ನಷ್ಟದ ಕುರಿತಾದ ಅಂದಾಜು ಇದೆಯೇ ; ಹಾಗಿದ್ದಲ್ಲಿ, ಈ ಕುರಿತಾದ ಮಾಹಿತಿಯನ್ನು ಒದಗಿಸುವುದು ;

ಈ) ಖಾಸಗಿ ವಾಹನಗಳ ಇಂತಹ ಚಟುವಟಿಕೆಗಳಿಂದ ಆಗುವ ನಷ್ಟವನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1048, ಪ್ರತಿಗಳು– 1500 – ಪಿ8